**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕಲಬುರಗಿ ಜಿಲ್ಲೆ ಚಿಂಚೋಳಿ ತಾಲ್ಲೂಕಿನ ಪಸ್ತಾಪುರ ಮತ್ತು ಇತರೆ 08 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಯ Variations ಮತ್ತು ಕಾಲಾವಧಿ ವಿಸ್ತರಣೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಕಡತ ಸಂಖ್ಯೆ ಗ್ರಾಕುನೀ&ನೈಇ/04/ಮುಇಂ/ತಾಂತ್ರಿಕ/2020
2. ದಿನಾಂಕ 29.07.2021 ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಡವಳಿಗಳು.

---

**ಪೀಠಿಕೆ:**

ಕಲಬುರಗಿ ಜಿಲ್ಲೆ ಚಿಂಚೋಳಿ ತಾಲ್ಲೂಕಿನ ಪಸ್ತಾಪುರ ಮತ್ತು ಇತರೆ 08 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಯ ಟೆಂಡರ್ ಐಟಂಗಳ ಪ್ರಮಾಣಗಳಿಗಿಂತ ಹೆಚ್ಚುವರಿ ಅನುಷ್ಠಾನ ಹಾಗೂ ಟೆಂಡರ್‌ನಲ್ಲಿ ಇಲ್ಲದಿರುವ ಹೊಸ ಐಟಂಗಳನ್ನು ಸೇರ್ಪಡೆಗೊಳಿಸಿ ಅನುಷ್ಠಾನಗೊಳಿಸಿರುವುದರಿಂದ ಅಂದಾಜು ಮೊತ್ತ ರೂ.605.26ಲಕ್ಷ ಪರಿಷ್ಕೃತವಾಗಿರುತ್ತದೆ.

ದಿನಾಂಕ:29.07.2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮತ್ತು liquidity damages ವಿಧಿಸಿ ಕಾಲಾವಧಿ ವಿಸ್ತರಣೆ ಮಾಡಲು ಮೇಲೆ ಓದಲಾದ (1)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಸದರಿ ಯೋಜನೆಗೆ ಒಟ್ಟು 215 ದಿನಗಳ ಕಾಲಾವಧಿ ವಿಸ್ತರಣೆಗೆ ಅನುಮೋದನೆ ನೀಡಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಿದಾಗ ಅದರ ಪೈಕಿ ಗುತ್ತಿಗೆದಾರರಿಂದ 33 ದಿನಗಳು ವಿಳಂಬವಾಗಿರುವುದು ಕಂಡುಬಂದಿರುತ್ತದೆ. ಸದರಿ ವಿಳಂಬಕ್ಕೆ ಶೇ.0.01ರಂತೆ 33 ದಿನಗಳಿಗೆ ರೂ.1.90ಲಕ್ಷ liquidity damages ವಿಧಿಸಿ, ಒಟ್ಟು 215 ದಿನಗಳಿಗೆ ಕಾಲಾವಧಿ ವಿಸ್ತರಣೆಗೆ ಅನುಮೋದನೆ ನೀಡಬೇಕಾಗಿರುತ್ತದೆ.

ಆದ್ದರಿಂದ ಮೇಲೆ ಓದಲಾದ (2)ರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮತ್ತು ಕಾಲಾವಧಿ ವಿಸ್ತರಣೆಗೆ ನಿಯಾಮಾನುಸಾರ liquidity damages ವಿಧಿಸಿ, ಅನುಮೋದನೆ ನೀಡುವ ಅವಶ್ಯವಿದೆ. ಆದ್ದರಿಂದ ಈ ಆದೇಶ:

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 207 ಗ್ರಾನೀಸ(4)2021 ಬೆಂಗಳೂರು, ದಿನಾಂಕ:27.08.2021.**

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಕಲಬುರಗಿ ಜಿಲ್ಲೆ ಚಿಂಚೋಳಿ ತಾಲ್ಲೂಕಿನ ಪಸ್ತಾಪುರ ಮತ್ತು ಇತರೆ 08 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ **ರೂ.605.26ಲಕ್ಷ (ಆರು ನೂರ ಐದು ಲಕ್ಷದ ಇಪ್ಪತ್ತಾರು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS)** ಕಾರ್ಯಕ್ರಮದ ಅಡಿಯಲ್ಲಿ ಹಾಗೂ 215 ದಿನಗಳ ಕಾಲಾವಧಿ ವಿಸ್ತರಣೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಅನುಮೋದನೆಯಾಗಿರುವ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಶಿಫಾರಸ್ಸು ಆಧರಿಸಿ ಅನುದಾನ ಬಿಡುಗಡೆಯಾಗತಕ್ಕದ್ದು ಹಾಗೂ ಸದರಿ ವೆಚ್ಚವನ್ನು 2021-22ರ ಸಾಲಿನ IMISನಲ್ಲಿ ಅಳವಡಿಸಲು ಸೂಚಿಸಿದೆ.

3. ಗುತ್ತಿಗೆದಾರರಿಗೆ ಪಾವತಿಸಬೇಕಾಗಿರುವ ಮೊತ್ತದಲ್ಲಿ ದಂಡದ ಮೊತ್ತವನ್ನು ನಿಯಾಮಾನುಸಾರ ಕಡಿತಗೊಳಿಸಿ, ಬಾಕಿ ಮೊತ್ತವನ್ನು ಪಾವತಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/08/2021

ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ -AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಕಲಬುರಗಿ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. &. ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಕಲಬುರಗಿ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ, "ಕರ್ನಾಟಕ ವಿಕಾಸ", ಗ್ರಾ.ಅ.&ಪಂ.ರಾಜ್ ಇಲಾಖೆ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಕಲಬುರಗಿ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.